## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1759 |
| ಸದಸ್ಯರ ಹೆಸರು | : | ಡಾ|| ತಳವಾರ್ ಸಾಬಣ್ಣ<br>(ನಾಮನಿರ್ದೇಶಿತ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 23.03.2026. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | G.P.T (6-8) ಹುದ್ದೆಗಳಲ್ಲಿ ನೇರ ನೇಮಕಾತಿಯಾಗಿ ಹಾಗೂ ಮುಂಬಡ್ತಿ ಪಡೆದು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; | G.P.T (6-8) ಹುದ್ದೆಗಳಲ್ಲಿ ನೇರ ನೇಮಕಾತಿಯಾಗಿರುವ ಶಿಕ್ಷಕರ ಸಂಖ್ಯೆ:18735. ಯಾವುದೇ ಶಿಕ್ಷಕರು ಮುಂಬಡ್ತಿ ಪಡೆದಿರುವುದಿಲ್ಲ. |
| ಆ) | ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಕಡತ ಸಚಿವ ಸಂಪುಟದಲ್ಲಿ ಅನುಮೋದನೆ ಪಡೆದಿದೆಯೇ; ಅನುಮೋದನೆ ಪಡೆದಿದ್ದರೆ, ಯಾವಾಗ ಸೇವಾ ನಿರತ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರಿಗೆ ನ್ಯಾಯ ಒದಗಿಸಲಾಗುವುದು; ಕಾಲಮಿತಿ ನಿಗದಿಪಡಿಸಬಹುದೇ; | ನಿಯಮಗಳ ತಿದ್ದುಪಡಿಗೆ ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಗಳು 1977ರ ಅನುಸೂಚಿ-1 ರಲ್ಲಿನ ಅಂಶ 17 ರನ್ವಯ ನಿಯಮಾನುಸಾರ ಕ್ರಮವಹಿಸಲಾಗಿದೆ.<br><br>ಆದರಂತೆ, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಪ್ರಾಥಮಿಕ ಶಾಲಾ ಶಿಕ್ಷಕರು ವೃಂದದಿಂದ ಹಾಗೂ ಪದವೀಧರ ಪ್ರಾಥಮಿಕ ಶಿಕ್ಷಕರು ವೃಂದದಿಂದ 2:1ರ ಅನುಪಾತದಲ್ಲಿ ಬಡ್ತಿ ಅವಕಾಶಗಳನ್ನು ಕಲ್ಪಿಸುವ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2026ರ ಅಂತಿಮ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 186 ಡಿಪಿಐ 2025, ದಿನಾಂಕ: 27.02.2026ನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ.<br><br>ಪ್ರೌಢ ಶಾಲಾ ಸಹ ಶಿಕ್ಷಕ ಗ್ರೇಡ್-2 ವೃಂದಕ್ಕೆ ಮುಂಬಡ್ತಿ ನೀಡುವ ಸಂಬಂಧ ದಿನಾಂಕ: 27.03.2025 ರಂದು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊರಡಿಸಲಾಗಿದೆ.<br><br>ಆದರೆ, ಪ್ರಸ್ತುತ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿವ್ಯೂ ಅರ್ಜಿ ಸಂಖ್ಯೆ: 433/2025ರ ಪ್ರಕರಣ ಬಾಕಿ ಇರುತ್ತದೆ. ಸದರಿ |
| ಇ) | ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಹಿರಿಯ ಮುಖ್ಯ ಉಪಾಧ್ಯಾಯರು ಮತ್ತು ಪ್ರೌಢಶಾಲಾ ಸಹ ಶಿಕ್ಷಕ ಗ್ರೇಡ್-2 ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಕೈಗೊಂಡ ಕ್ರಮಗಳೇನು; | |
| ಈ) | ವೃಂದ ಮತ್ತು ನೇಮಕಾತಿ ನಿಯಮಗಳು ತಿದ್ದುಪಡಿಗಾಗಿ ಆಗ್ರಹಿಸಿ ಈಗಾಗಲೇ 2018 ಮತ್ತು 2020 ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರ ಸಂಘ (ರಿ) ರಾಜ್ಯ ಘಟಕವು ಎರಡು ಬಾರಿ ಫ್ರೀಡಂ | |

| | | |
|---|---|---|
| | ಪಾರ್ಕ್ ಚಳುವಳಿ ಮಾಡಿದ್ದರು ನ್ಯಾಯ ಸಿಗದೇ ಇರುವುದಕ್ಕೆ ಕಾರಣಗಳೇನು; | ಪ್ರಕರಣ ಇತ್ಯರ್ಥಗೊಂಡ ಕೂಡಲೇ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಪ್ರೌಢಶಾಲಾ ಸಹ ಶಿಕ್ಷಕರ ವೃಂದಕ್ಕೆ ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು. |
| ಉ) | ಶಿಕ್ಷಕರ ನ್ಯಾಯಯುತ ಮುಂಬಡ್ತಿಗಳನ್ನು ನೀಡಲು ಸರ್ಕಾರ ತುರ್ತು ಕ್ರಮಗಳನ್ನು ಕೈಗೊಂಡಿದೆಯೇ; ಈ ಕುರಿತು ಸರ್ಕಾರದ ನಿಲುವೇನು | |

ಇಪಿ 51 ಡಿಎಆರ್ 2026

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು